CC NO.  PW   CW

30ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿ, ಬೆಂಗಳೂರು.
ಬೆಂಗಳೂರು ನಗರ.

ಸಿ.ಸಿ. ನಂ:14536/2018    ಪ್ರಾಸಾ-1    ಚಾಸಾ-1

| | |
|---|---|
| ಸಾಕ್ಷಿಯ ಹೆಸರು | ಪ್ರವೀಂದ್ರ ಕುಮಾರ್ |
| ತಂದೆಯ/ಗಂಡನ ಹೆಸರು | ಸತ್ಯ ನಾರಾಯಣ |
| ವಯಸ್ಸು | 47 ವರ್ಷ |
| ಉದ್ಯೋಗ | ಉಪನ್ಯಾಸಕರು |
| ವಿಳಾಸ | ಬೆಂಗಳೂರು. |

ಸಾಕ್ಷಿಯನ್ನು ಈ ದಿವಸ ದಿನಾಂಕ:08-03-2022 ರಂದು ಕರೆಯಿಸಿ ಪ್ರಮಾಣಿಕರಿಸಲಾಯಿತು.

ಮುಖ್ಯ ವಿಚಾರಣೆ: ಹಿರಿಯ ಸ.ಸ.ಅ. ರವರಿಂದ.

ದಿ:10-4-2016 ರಂದು ಪೀಣ್ಯಾದಲ್ಲಿರುವ ನಮ್ಮ ಸಂಬಂಧಿಕರ ಮನೆಗೆ ಹೋಗಿದ್ದೆನು. ದಿ:11-4-2016 ರಂದು ರಾತ್ರಿ 10-00 ಗಂಟೆಗೆ ವಾಪಸ್ಸು ಬಂದಾಗ ಮನೆಯ ಬಾಗಿಲು ತೆರೆದಿತ್ತು. ಹೋಗಿ ನೋಡಿದಾಗ ಒಂದು ಜೊತೆ ಹಿಯರಿಂಗ್ ಕಳುವಾಗಿದ್ದವು. ಈ ಬಗ್ಗೆ ದೂರನ್ನು ನೀಡಿರುತ್ತೇನೆ. ಅದನ್ನು ನಿಪಿ-1 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಂತರ ಪೋಲಿಸರು ಸ್ಥಳಕ್ಕೆ ಬಂದು ಮಹಜರ್ ಕ್ರಮ ಜರುಗಿಸಿರುತ್ತಾರೆ. ಅದನ್ನು ನಿಪಿ-2 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸುಮಾರು 11 ತಿಂಗಳ ಬಳಿಕ ಪೋಲಿಸರು ಕಳುವಾದ ವಸ್ತುಗಳನ್ನು ಗುರುತಿಸಲು ಕರೆದಿದ್ದರು. ನಾನು ಪೋಲಿಸ್ ಠಾಣೆಗೆ ಹೋಗಿ ಕಳುವಾದ ವಸ್ತುಗಳನ್ನು ನೋಡಿ ಗುರುತಿಸಿರುತ್ತೇನೆ. ಅದರ ಪೋಟೋವನ್ನು ನಿಪಿ-3 ಎಂದು

ಗುರುತಿಸಲಾಯಿತು. ಪೋಲಿಸರು ನಮ್ಮ ಮನೆಯಲ್ಲಿ ಕಳ್ಳತನ ಮಾಡಿದ ಆರೋಪಿಯನ್ನು ನನಗೆ ತೋರಿಸಿಲ್ಲ. ಈ ಸಂಬಂಧವಾಗಿ ನಾನು ಪೋಲಿಸರಿಗೆ ಹೇಳಿಕೆ ಕೊಟ್ಟಿಲ್ಲ.

(ಈ ಹಂತದಲ್ಲಿ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಕೋರಿದ್ದರಿಂದ ಅನುಮತಿ ನೀಡಲಾಯಿತು.)

ಪಾಟಿ ಸವಾಲುಃ ಹಿರಿಯ ಸ.ಸ.ಅ. ರವರಿಂದಃ

ದಿಃ22-3-2017 ರ ಹೇಳಿಕೆಯನ್ನು ಸಾಕ್ಷಿಗೆ ಓದಿ ಹೇಳಿದಾಗ ಸಾಕ್ಷಿಯು ಅಲ್ಲಗಳೆದಿರುತ್ತಾರೆ. ಈ ದಿನ ---------------- ಇಬ್ಬರೂ ಆರೋಪಿಗಳನ್ನು ನೋಡಿರುತ್ತೇನೆ ಎಂದು ನಿಪಿ-4 ರಂತೆ ಪೋಲಿಸರ ಮುಂದೆ ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದ - ಇಲ್ಲ.

ಮರು ವಿಚಾರಣೆಃ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

30ನೇ ಅ.ಮು.ಮ.ದಂ. ಬೆಂಗಳೂರು.